ಬೀಳಗಿ ಕ್ಷೇತ್ರದ ಸಾವಳಗಿಯಲ್ಲಿ ಸರ್ಕಾರಿ ಪದವಿ ಕಾಲೇಜು ಪ್ರಾರಂಭಿಸುವುದು

1003 (1329) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಿಂದ ಬೀಳಗಿ ಕ್ಷೇತ್ರದ ಸಾವಳಗಿಯಲ್ಲಿ ಸರ್ಕಾರಿ ಪದವಿ ಕಾಲೇಜು ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಾವಳಗಿ ಸುತ್ತ ಮುತ್ತ 40 ಕಿ.ಮೀ.ವರೆಗೆ ಯಾವುದೇ ಪದವಿ ಕಾಲೇಜುಗಳು ಇರದೇ ಇದ್ದಾಗ್ಯೂ ಹಾಗೂ ಮಾನ್ಯ ಮುಖ್ಯಮಂತ್ರಿಗಳು ಇಲ್ಲಿ ಕಾಲೇಜು ಪ್ರಾರಂಭಿಸಲು ಸೂಚನೆ ನೀಡಿದ್ದಾಗ್ಯೂ ಕಾಲೇಜು ಪ್ರಾರಂಭಿಸದೇ ಇರುವ ತೊಂದರೆಗಳೇನು;

ಇ) ಸರ್ಕಾರಿ ಪದವಿ ಕಾಲೇಜು ಪ್ರಾರಂಭಿಸಲು ಗ್ರಾಮಸ್ಥರು ರೂ.25 ಲಕ್ಷಗಳನ್ನು ಡಿಪಾಜಿಟ್ ಕಟ್ಟುವ ಕಾರಾರನ್ನು ಸರ್ಕಾರ ವಿಧಿಸಿದೆಯೇ;

ಈ) ಇದರಿಂದ ಗ್ರಾಮೀಣ ಭಾಗದಲ್ಲಿ ಮಕ್ಕಳಿಗೆ ಶಿಕ್ಷಣ ಪಡೆಯಲು ಅನುಕೂಲವಾಗಲಿ ಎಂಬ ದೃಷ್ಟಿಯಿಂದ ಅದನ್ನು ಮನ್ನಾ ಮಾಡಿ ಸರ್ಕಾರದವರು ಪದವಿ ಕಾಲೇಜು ಪ್ರಾರಂಭಿಸಲು ಪರಿಶೀಲಿಸುವರೆ?

ಡಾ।। ಜಿ.ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಪೂರ್ವ ಸಿದ್ದತೆಯನ್ನು ಮಾಡಿಕೊಂಡು 2003-2004ನೇ ಸಾಲಿನಿಂದ ಸಾವಳಗಿಯಲ್ಲಿ ಸರ್ಕಾರಿ ಕಾಲೇಜನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸುವಂತೆ ಕಾಲೇಜು ಶಿಕ್ಷಣ ಆಯುಕ್ತರಿಗೆ ಸೂಚನೆ ನೀಡಲಾಗಿದೆ.

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಯಲಹಂಕ ಉಪನಗರದ 4ನೇ ಹಂತದಲ್ಲಿ ಕರ್ನಾಟಕ ಗೃಹ ಮಂಡ್ಯ ನಿರ್ಮಿಸಿದ ಶಿಥಿಲ ಗೊಂಡ ಮನೆಗಳ ಹಂಚಿಕೆದಾರರ ವಿರುದ್ಧ ಕ್ರಮ

1005 (1331) ಶ್ರೀ ಜೆ.ಟಿ. ಪಾಟೀಲ್ (ಬೀಳಗಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಲಹಂಕ ಉಪನಗರ 4ನೇ ಹಂತದಲ್ಲಿ ಕರ್ನಾಟಕ ಗೃಹ ಮಂಡಳಿ ನಿರ್ಮಿಸಿದ 707 ಕಳಪೆ ದರ್ಜೆಯ ಮನೆಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇತ್ತೀಚೆಗೆ ಹೊಸದಾಗಿ ನಿರ್ಮಿಸಿದ ಮನೆಗಳ ಮೇಲೆ ಶಿಥಿಲವಾದ ಮನೆಗಳು ಬಿದ್ದು ತೊಂದರೆಯಾಗುತ್ತಿದ್ದರೂ ಸಹ ಕರ್ನಾಟಕ ಗೃಹ ಮಂಡಳಿಯು ಸಂಬಂಧಪಟ್ಟವರ ಮೇಲೆ ಯಾವುದೇ ಕ್ರಮ ಜರುಗಿಸದೆ ಅಲ್ಲಿನ ನಿವಾಸಿಗಳಿಗೆ ತೊಂದರೆ ಆಗುವುದನ್ನು ತಪ್ಪಿಸಲು ಯಾವ ಕ್ರಮ ಕೈಗೊಂಡಿದೆ?